# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1642

2) ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭಾ ಕ್ಷೇತ್ರ)

3) ಉತ್ತರಿಸಬೇಕಾದ ದಿನಾಂಕ : 18-03-2026

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯಲ್ಲಿ ಒಳನಾಡು ಮೀನುಗಾರಿಕೆ ಚಟುವಟಿಕೆಗಳು ಕುಂಠಿತಗೊಳ್ಳುತ್ತಿವೆ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಜಿಲ್ಲೆಯ ಮೀನುಗಾರಿಕೆ ನಿಗಮಕ್ಕೆ ಹೆಚ್ಚಿನ ಅನುದಾನ ಒದಗಿಸಿ ಗ್ರಾಹಕರಿಗೆ ತಾಜಾ ಮೀನುಗಳನ್ನು ವಿತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕಲಬುರಗಿ ಜಿಲ್ಲೆಯಲ್ಲಿ ಒಳನಾಡು ಮೀನುಗಾರಿಕೆ ಚಟುವಟಿಕೆಗಳನ್ನು ಉತ್ತೇಜಿಸಲು ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಯಾವುದೇ ಮೀನುಗಾರಿಕೆ ಚಟುವಟಿಕೆಗಳು ಕುಂಠಿತವಾಗಿರುವುದಿಲ್ಲ.<br>• ಕಲಬುರಗಿ ಜಿಲ್ಲೆಗೆ 2025-26ನೇ ಸಾಲಿನಲ್ಲಿ 74 ಇಲಾಖಾ ಕೆರೆಗಳನ್ನು ಅಭಿವೃದ್ಧಿಪಡಿಸಿ 90.95 ಲಕ್ಷ ಮೀನುಮರಿ ಬಿತ್ತನೆ ಮಾಡಲಾಗಿದೆ ಮತ್ತು 6 ಜಲಾಶಯಗಳನ್ನು ಅಭಿವೃದ್ಧಿಪಡಿಸಿ 46 ಲಕ್ಷ ಮೀನುಮರಿ ಬಿತ್ತನೆ ಮಾಡಲಾಗಿದೆ.<br>• ಜಲಾಶಯ ಅಭಿವೃದ್ಧಿ ಯೋಜನೆಯಡಿ ಭೀಮಾ ನದಿಗೆ 9.00 (ಲಕ್ಷ) ಬಲಿತ ಮೀನುಮರಿ ದಾಸ್ತಾನು ಮಾಡಲಾಗಿದೆ.<br>• ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಜಿಲ್ಲೆಯಲ್ಲಿ 10 ಇ-ರಿಕ್ಷಾಗಳನ್ನು ನೀಡಿದ್ದು, ತಾಜಾ ಮೀನು ಹಾಗೂ ಮೀನು ಮಾರಾಟ ಮಾಡಲು ಖಾದ್ಯಗಳನ್ನು ವಿತರಿಸಲು ಕ್ರಮಕೈಗೊಳ್ಳಲಾಗಿದೆ ಹಾಗೂ ಮೀನು ಮಾರಾಟಕ್ಕಾಗಿ 7 ದ್ವಿಚಕ್ರ ವಾಹನ ನೀಡಲಾಗಿದೆ ಹಾಗೂ ಶಾಖ ನಿಯಂತ್ರಿತ ವಾಹನ ನೀಡಲಾಗಿರುತ್ತದೆ. |
| ಆ) | ಕಲಬುರಗಿ ನಗರ ಹಾಗೂ ಜಿಲ್ಲೆಯ ಪ್ರಮುಖ ತಾಲ್ಲೂಕು ಕೇಂದ್ರಗಳಲ್ಲಿ ಹೆಚ್ಚಿನ ಮೀನುಗಾರಿಕೆ ಸ್ಟಾಲ್ (Stall) ಗಳನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ; ಇಲ್ಲದಿದ್ದಲ್ಲಿ, ಮೀನು ಮಾರಾಟಗಾರರಿಗೆ ಪ್ರೋತ್ಸಾಹ ನೀಡಲು ಸರ್ಕಾರಕ್ಕಿರುವ ಯೋಜನೆಯೇನು; | ಕಲಬುರಗಿ ನಗರ ಹಾಗೂ ಜಿಲ್ಲೆಯ ಪ್ರಮುಖ ತಾಲ್ಲೂಕು ಕೇಂದ್ರಗಳಲ್ಲಿ ಮೀನುಗಾರಿಕೆ ಸ್ಟಾಲ್‌ಗಳನ್ನು ತೆರೆಯಲು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.<br>ಆದರೆ, ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ ಅಡಿ ತಾಜಾ ಮೀನು ಮಾರಾಟ ಮಾಡಲು ಇ-ರಿಕ್ಷಾ, ಸರಬರಾಜು ಹಾಗೂ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿ ಮೀನು ಮಾರುಕಟ್ಟೆ ಸಹಾಯ ಯೋಜನೆಯಡಿ ದ್ವಿಚಕ್ರ ವಾಹನ ಖರೀದಿಗೆ ಸಹಾಯಧನ ನೀಡಲಾಗುತ್ತಿದೆ. |
| ಇ) | ಜಿಲ್ಲೆಯಲ್ಲಿ ಅಸ್ತಿತ್ವದಲ್ಲಿರುವ ಮೀನು ಮಾರುಕಟ್ಟೆಗಳನ್ನು ಆಧುನೀಕರಿಸಲು ಅಥವಾ ಹೊಸ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; (ವಿವರ ನೀಡುವುದು) | ಜಿಲ್ಲೆಯಲ್ಲಿ ಅಸ್ತಿತ್ವದಲ್ಲಿರುವ ಮೀನು ಮಾರುಕಟ್ಟೆಗಳನ್ನು ಆಧುನೀಕರಿಸಲು ಅಥವಾ ಹೊಸ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

| | | |
|---|---|---|
| ಈ) | ಜಿಲ್ಲೆಯಲ್ಲಿ ತಾಂತ್ರಿಕ ಕಾರಣಗಳಿಂದ (ಆಧಾರ್ ಮ್ಯಾಪಿಂಗ್, ಬ್ಯಾಂಕ್ ಖಾತೆ ಸಮಸ್ಯೆ) ಬಾಕಿ ಉಳಿದಿರುವ ಪರಿಹಾರ ಪ್ರಕರಣಗಳ ಸಂಖ್ಯೆ ಎಷ್ಟು; ಇವುಗಳನ್ನು ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಜಿಲ್ಲೆಯಲ್ಲಿ ತಾಂತ್ರಿಕ ಕಾರಣಗಳಿಂದ ಪರಿಹಾರ ವಿತರಣೆಗೆ ಬಾಕಿ ಇರುವ ಪ್ರಕರಣಗಳು ಯಾವುದು ಇರುವುದಿಲ್ಲ. |
| ಉ) | ಪರಿಹಾರ ವಿತರಣೆಯಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಮತ್ತು ರೈತರಿಗೆ ಸಕಾಲದಲ್ಲಿ ಹಣ ತಲುಪಿಸಲು ಸರ್ಕಾರವು ಜಿಲ್ಲಾ ಮಟ್ಟದಲ್ಲಿ ವಿಶೇಷ ಕೋಶವನ್ನು (Special Cell) ಸ್ಥಾಪಿಸುವ ಉದ್ದೇಶ ಹೊಂದಿದ್ದೆಯೇ | ಉದ್ಭವಿಸುವುದಿಲ್ಲ. |

ಸಂಖ್ಯೆ: ಪಸಂಮೀ ಇ-71 ಮೀಇಯೋ 2026

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು